ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	432 (461)
ಸದಸ್ಯರ ಹೆಸರು	ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	21.02.2022
ಉತ್ತರಿಸಬೇಕಾದ ಸಚಿವರು	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

<table>
<tr><th>ಪ್ರಶ್ನೆ</th><th>ಉತ್ತರ</th></tr>
<tr><td>ಅ) 1995ರ ನಂತರ ಆರಂಭವಾದ ಅನುದಾನ ರಹಿತ ಶಾಲಾ ಕಾಲೇಜುಗಳ ಸಂಖ್ಯೆ ಎಷ್ಟು: ಈ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಇರುವ ಸಮಸ್ಯೆಗಳೇನು: ಅನುದಾನಕ್ಕೆ ಒಳಪಡಿಸಿದಲ್ಲಿ, ಇದಕ್ಕಾಗಿ ತಗುಲಬಹುದಾದ ವೆಚ್ಚ ಎಷ್ಟು:</td><td>1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆಗಳಲ್ಲಿ ಅನೇಕ ಪ್ರಾಥಮಿಕ ಶಾಲೆಗಳು (01 ರಿಂದ 5ನೇ ತರಗತಿ) ಆಂಗ್ಲ ಮಾಧ್ಯಮ ಶಾಲೆಗಳಾಗಿ ಪರಿವರ್ತನೆಯಾಗಿವೆ. ಉಳಿದ ಕನ್ನಡ ಮಾಧ್ಯಮ ಶಾಲೆಗಳನ್ನು ವೇತನಾನುದಾನಕ್ಕೆ ಒಳಪಡಿಸಲು ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳ ವಿವರ ಹಾಗೂ ಅಂದಾಜು ಆಯವ್ಯಯದ ವಿವರ ಈ ಕೆಳಕಂಡಂತಿದೆ.
<table>
<tr><th>ಶಾಲೆ</th><th>ಪ್ರಾಥಮಿಕ</th><th>ಹಿರಿಯ ಪ್ರಾಥಮಿಕ</th><th>ಪ್ರೌಢ</th><th>ಪದವಿ ಪೂರ್ವ ಕಾಲೇಜು</th></tr>
<tr><td>ಒಟ್ಟು</td><td>6412</td><td>8678</td><td>989</td><td>3122</td></tr>
<tr><td>ಅಂದಾಜು ವೆಚ್ಚ ರೂ ಲಕ್ಷಗಳಲ್ಲಿ (ಒಂದು ವರ್ಷಕ್ಕೆ)</td><td>45778.26</td><td>36187.26</td><td>64847.09</td><td>27520,30,5,080-00</td></tr>
</table>
</td></tr>
<tr><td>ಆ) ಯಾವ ಕಾರಣಕ್ಕಾಗಿ ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯು ನಿಧಾನಗತಿಯಲ್ಲಿ ಸಾಗುತ್ತಿದೆ: ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ</td><td>ಆರ್ಥಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8/2020 ದಿನಾಂಕ:10-06-2020ರಂತೆ ಆರ್ಥಿಕ ಮಿತವ್ಯಯದ ಆದೇಶ ಜಾರಿಯಲ್ಲಿರುತ್ತದೆ.
1995ರ ನಂತರ ಆರಂಭವಾದ ಅನುದಾನ ರಹಿತ ಕನ್ನಡ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ</td></tr>
</table>

ತೆಗೆದುಕೊಂಡ ಕ್ರಮಗಳೇನು: ಯಾವ ಕಾಲಮಿತಿಯಲ್ಲಿ ಅನುದಾನಕ್ಕೆ ಒಳಪಡಿಸಲಾಗುವುದು?	ಸಂಬಂಧ ಹಿಂದಿನ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಹಾಲಿ ಸಭಾಪತಿ ರವರ ಸಮ್ಮುಖದಲ್ಲಿ ಏರ್ಪಡಿಸಲಾಗಿದ್ದ ಸಭೆಯಲ್ಲಿ, ಸದರಿ ಶಾಲಾ ಕಾಲೇಜುಗಳನ್ನು ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ 1995 ರಿಂದ 2019 ರವರೆಗೆ ಪ್ರತಿ 05 ವರ್ಷದ ಬ್ಲಾಕ್ ಅವಧಿಯಲ್ಲಿ ಪ್ರಾರಂಭಿಸಲಾಗಿರುವ ಶಾಲಾ ಕಾಲೇಜುಗಳಲ್ಲಿ ಎಷ್ಟು ಶಿಕ್ಷಕರು / ಉಪನ್ಯಾಸಕರುಗಳು / ಬೋಧಕೇತರುಗಳು ಕಾರ್ಯ ನಿರ್ವಹಿಸುತ್ತಿದ್ದಾರೆ ಹಾಗೂ ಇವರುಗಳನ್ನು ಅನುದಾನಕ್ಕೆ ಒಳಪಡಿಸಿದ್ದಲ್ಲಿ ವಾರ್ಷಿಕವಾಗಿ ತಗಲುವ ಅಂದಾಜು ವೆಚ್ಚದ ಮಾಹಿತಿಯನ್ನು ಪಡೆಯಲು ಸೂಚಿಸಿದ್ದು, ಆಯುಕ್ತಾಲಯಗಳು ಮತ್ತು ಪದವಿ ಪೂರ್ವ ನಿರ್ದೇಶನಾಲಯದಿಂದ ಪಡೆದು ಪರಿಶೀಲಿಸಲಾಗುತ್ತಿದೆ.

ಇಪಿ 51 ಪಿಎಂಸಿ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.